**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಸೊನ್ನ ಮತ್ತು ಇತರೆ 22 ಗ್ರಾಮಗಳ ಹಾಗೂ ಬಸರಕೋಡು ಮತ್ತು ಇತರೆ 27 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variation ಹಾಗೂ ಕಾಲಾವಧಿ ವಿಸ್ತರಣೆ ಪ್ರಸ್ತಾವನೆ ಕುರಿತು.

**ಓದಲಾಗಿದೆ:**
1. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತ ಸಂಖ್ಯೆ:ಗ್ರಾಕುನೀ&ನೈಇ/352/ಮುಇಂ/ತಾಂತ್ರಿಕ/2021.
2. ದಿನಾಂಕ:29.09.2021ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಗಳ Variation in tender items and in new items ಪ್ರಾಧಿಕಾರ ಸಭೆಯ ನಡವಳಿಗಳು.

---

**ಪೀಠಿಕೆ:**

ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಸೊನ್ನ ಮತ್ತು ಇತರೆ 22 ಗ್ರಾಮಗಳ ಹಾಗೂ ಬಸರಕೋಡು ಮತ್ತು ಇತರೆ 27 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಯ ಟೆಂಡರ್ ಐಟಂಗಳ ಪ್ರಮಾಣಗಳಿಗಿಂತ ಹೆಚ್ಚುವರಿ ಅನುಷ್ಠಾನ ಹಾಗೂ ಟೆಂಡರ್‌ನಲ್ಲಿ ಇಲ್ಲದಿರುವ ಹೊಸ ಐಟಂಗಳನ್ನು ಸೇರ್ಪಡೆಗೊಳಿಸಿ ಅನುಷ್ಠಾನಗೊಳಿಸಿರುವುದರಿಂದ ಅಂದಾಜು ಮೊತ್ತ **ರೂ.5253.46ಲಕ್ಷ** ಪರಿಷ್ಕೃತವಾಗಿರುತ್ತದೆ.

ದಿನಾಂಕ:29.09.2021ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಗಳ Variation in tender items and in new items & EOT ಪ್ರಾಧಿಕಾರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಹಾಗೂ ಕಾಲಾವಧಿ ವಿಸ್ತರಣೆ ಮಾಡಲು ಮೇಲೆ ಓದಲಾದ (1)ರ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಪ್ರಸ್ತುತ ಸದರಿ ಯೋಜನೆಗಳಿಗೆ ಓದಲಾದ (2)ರ ಪರಿಷ್ಕೃತ ಅಂದಾಜಿಗೆ ದಂಡರಹಿತವಾಗಿ ಒಟ್ಟು **853** ದಿನಗಳಿಗೆ ಕಾಲಾವಧಿ ವಿಸ್ತರಣೆಗೆ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿರುತ್ತದೆ. ಆದ್ದರಿಂದ ಈ ಆದೇಶ.

ಚಾಲ್ತಿ ಪಾರದರ್ಶಕ ನಿಯಮಾನುಸಾರ **ಬಳ್ಳಾರಿ / ವಿಜಯನಗರ** ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ 2215–ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215–MVS) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

30/12

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 361 ಗ್ರಾನೀಸ(4)2021 ಬೆಂಗಳೂರು, ದಿನಾಂಕ:30.12.2021.** 1133

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ಬಹುಗ್ರಾಮ ಕುಡಿಯುವ ನೀರು ಪೂರೈಕೆ ಯೋಜನೆಗಳ ಕಾಮಗಾರಿಯ ಟೆಂಡರ್ ಐಟಂಗಳ ವ್ಯತ್ಯಾಸದಿಂದಾಗಿ ಈ ಕೆಳಕಂಡ 2 ಯೋಜನೆಗಳ ಪರಿಷ್ಕೃತ ಅಂದಾಜು ಮೊತ್ತ **ರೂ.5253.46 (ಐದು ಸಾವಿರದ ಇನ್ನೂರ ಐವತ್ಮೂರು ಲಕ್ಷದ ನಲವತ್ತಾರು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ** 2215–ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215–MVS) ಕಾರ್ಯಕ್ರಮದ ಅಡಿಯಲ್ಲಿ ಹಾಗೂ **853** ದಿನಗಳಿಗೆ ಕಾಲಾವಧಿ ವಿಸ್ತರಣೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರ.ಸ | ಜಿಲ್ಲೆ | ತಾಲ್ಲೂಕು | ಯೋಜನೆ | ಪರಿಷ್ಕೃತ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|---|
| 1 | ಬಳ್ಳಾರಿ | ಹಗರಿ ಬೊಮ್ಮನಹಳ್ಳಿ | ಸೊನ್ನ ಮತ್ತು ಇತರೆ 22 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | **2608.94** |
| 2 | | | ಬಸರಕೋಡು ಮತ್ತು ಇತರೆ 27 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ | **2644.52** |
| | | | **ಒಟ್ಟು** | **5253.46** |

**2.** ಈ ಆದೇಶದಲ್ಲಿ ಅನುಮೋದನೆಯಾಗಿರುವ ಯೋಜನೆಗಳ ಪರಿಷ್ಕೃತ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE,RDWSD ರವರ ಶಿಫಾರಸ್ ಆಧರಿಸಿ ಅನುದಾನ ಬಿಡುಗಡೆಯಾಗತಕ್ಕದ್ದು ಹಾಗೂ ಸದರಿ ವೆಚ್ಚವನ್ನು 2022–23ರ ಸಾಲಿನ IMISನಲ್ಲಿ ಅಳವಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

31/12

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ (ಅಭಿವೃದ್ಧಿ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬಳ್ಳಾರಿ / ವಿಜಯನಗರ ಜಿಲ್ಲೆ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. &. ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.

6. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, **ಬಳ್ಳಾರಿ / ವಿಜಯನಗರ ಜಿಲ್ಲೆ.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. &. ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ, "ಕರ್ನಾಟಕ ವಿಕಾಸ", ಗ್ರಾ.ಅ.&ಪಂ.ರಾಜ್ ಇಲಾಖೆ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಹರಪನಹಳ್ಳಿ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. &. ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು). ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
17. ಗ್ರಾ.ಅ. &. ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.